# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 40 (121)
ಸದಸ್ಯರ ಹೆಸರು : ಶ್ರೀಮತಿ ಹೇಮಲತಾ ನಾಯಕ್ (ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ : 15-07-2024
ಉತ್ತರಿಸುವ ಸಚಿವರು : ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| ಅ) | ಕೊಪ್ಪಳ ಜಿಲ್ಲೆಯಲ್ಲಿರುವ ಪಿಯುಸಿ ಕಾಲೇಜುಗಳ ಕಟ್ಟಡ ಉದ್ಘಾಟನೆಗೆ ಸಿದ್ಧವಾಗಿರುವ ಕಾಲೇಜುಗಳು ಯಾವುವು; ಹಾಗಿದ್ದಲ್ಲಿ, ಕಟ್ಟಡ ಉದ್ಘಾಟನೆ ಮಾಡದೆ ಇರುವುದಕ್ಕೆ ಕಾರಣವೇನು; | ಕೊಪ್ಪಳ ಜಿಲ್ಲೆಯಲ್ಲಿ ಯಾವುದೇ ಪದವಿ ಪೂರ್ವ ಕಾಲೇಜುಗಳ ಕಟ್ಟಡಗಳು ಪ್ರಸ್ತುತ ಉದ್ಘಾಟನೆಗೆ ಸಿದ್ಧವಾಗಿರುವುದಿಲ್ಲ. |
| ಆ) | ಕೊಪ್ಪಳ ಜಿಲ್ಲೆಯಾದ್ಯಂತ ಇರುವ ಕಾಲೇಜುಗಳ ಕಟ್ಟಡಗಳು ಶಿಥಿಲಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ, ಬಂದಿದ್ದಲ್ಲಿ, ಯಾವ ಯಾವ ಕಾಲೇಜುಗಳಲ್ಲಿ ದುರಸ್ಥಿ ಕಾರ್ಯಗಳನ್ನು ಕೈಗೊಳ್ಳಲಾಗಿದೆ; (ಜಿಲ್ಲಾವಾರು ಮಾಹಿತಿ ನೀಡುವುದು) | ಬಂದಿದೆ.<br>ಕೊಪ್ಪಳ ಜಿಲ್ಲೆಯ ಸರ್ಕಾರಿ ಪದವಿ ಪೂರ್ವ ಕಾಲೇಜು, ಶ್ರೀರಾಮನಗರ, ಗಂಗಾವತಿ ತಾಲ್ಲೂಕು, ಈ ಕಾಲೇಜಿನ ನಾಲ್ಕು ತರಗತಿ ಕೊಠಡಿಗಳ ಕಟ್ಟಡವು ಶಿಥಿಲಗೊಂಡಿದ್ದು, ಸದರಿ ಕೊಠಡಿಗಳಲ್ಲಿ ಪದವಿ ಪೂರ್ವ ತರಗತಿಗಳು ನಡೆಯುತ್ತಿರುವುದಿಲ್ಲ. ಸದರಿ ಕಟ್ಟಡವನ್ನು ನೆಲಸಮಗೊಳಿಸಲು PWDಯವರು ವರದಿಯನ್ನು ನೀಡಿರುತ್ತಾರೆ. ಪ್ರಸುತ ಸದರಿ ಕಾಲೇಜು ಪ್ರೌಢಶಾಲಾ ವಿಭಾಗದ ಹೆಚ್ಚುವರಿ ತರಗತಿ ಕೊಠಡಿಗಳಲ್ಲಿ ಕಾರ್ಯ ನಿರ್ವಹಿಸುತ್ತಿದೆ. ಮುಂದುವರೆದು, 2023-24 ನೇ ಸಾಲಿನಲ್ಲಿ ಕಾಲೇಜುಗಳ ದುರಸ್ತಿ ಕಾರ್ಯಗಳನ್ನು ಕೈಗೊಳ್ಳಲು ಅನುಮೋದನೆ ನೀಡಲಾಗಿದೆ.<br>**(ಅನುಬಂಧ-1 ರಲ್ಲಿ ಒದಗಿಸಲಾಗಿದೆ).** |
| ಇ) | ಪಿಯುಸಿ ಕಾಲೇಜುಗಳಲ್ಲಿ ಉಪನ್ಯಾಸಕರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮವೇನು; | ಬಂದಿದೆ, ಖಾಲಿ ಹುದ್ದೆಗಳಿಗೆ ಅತಿಥಿ ಉಪನ್ಯಾಸಕರನ್ನು ನೇಮಕ ಮಾಡಿಕೊಳ್ಳಲಾಗಿದೆ. |
| ಈ) | ಶಕ್ತಿಯೋಜನೆ ಬಂದಾಗಿನಿಂದ ಬಸ್ ನಿಲ್ದಾಣದ ಬಳಿ ಬಸ್‌ಗಳು ನಿಲ್ಲದೆ ಹೋಗುವುದರಿಂದ : ವಿದ್ಯಾರ್ಥಿಗಳಿಗೆ ಕಾಲೇಜುಗಳಿಗೆ ತೆರಳಲು ತೊಂದರೆಯಾಗುತ್ತಿರುವುದು | ನಾಲ್ಕು ಸಾರಿಗೆ ಸಂಸ್ಥೆಗಳಾದ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ, ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ, ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಮತ್ತು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ಬಸ್‌ಗಳಲ್ಲಿ ಮಹಿಳೆಯರಿಗೆ ಉಚಿತ ಸಾರಿಗೆ ವ್ಯವಸ್ಥೆ |

| | | |
|---|---|---|
| | ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮವೇನು: (ವಿವರ ನೀಡುವುದು) | ಕಲ್ಪಿಸಿರುವುದರಿಂದ, ಪ್ರಯಾಣಿಕರ ಸಂಖ್ಯೆ ಗಣನೀಯವಾಗಿ ಹೆಚ್ಚಾಗಿದ್ದು, ಇದರಿಂದಾಗಿ ಶಾಲಾ ಮಕ್ಕಳಿಗೆ ಅನಾನುಕೂಲವಾಗುತ್ತಿರುವ ಬಗ್ಗೆ ಕೆಲವು ಸ್ಥಳಗಳಲ್ಲಿ ವರದಿಯಾಗಿದ್ದು, ಅಂತಹ ಸ್ಥಳಗಳನ್ನು ಗುರುತಿಸಿ ಆ ಸ್ಥಳಗಳಿಗೆ ನಿಗಮದ ಸಿಬ್ಬಂದಿಗಳನ್ನು ಮೇಲ್ವಿಚಾರಣೆಗಾಗಿ ನಿಯೋಜಿಸಲಾಗುತ್ತಿದೆ ಹಾಗೂ ಬೇಡಿಕೆಗೆ ಅನುಗುಣವಾಗಿ ಹೆಚ್ಚುವರಿ ಸರತಿಗಳನ್ನು ಅಳವಡಿಸಲು ಕ್ರಮ ವಹಿಸಲಾಗುತ್ತಿದೆ.<br><br>ಶಾಲಾ/ಕಾಲೇಜು ವಿದ್ಯಾರ್ಥಿಗಳಿಗೆ ಅವರ ಕಾಲೇಜು ಸಮಯಕ್ಕೆ ಅವಶ್ಯಕತೆಗೆ ಅನುಗುಣವಾಗಿ ಸುತ್ತುವಳಿಗಳು/ಬಸ್ಸುಗಳನ್ನು ಕಲ್ಪಿಸಲು ಈ ಕೆಳಕಂಡ ಅಂಶಗಳನ್ನು ಅನುಸರಿಸಲು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆಗಳನ್ನು ನೀಡಲಾಗಿದೆ.<br><br>• ಗ್ರಾಮೀಣ ಪ್ರದೇಶಗಳ ವಿಭಾಗದ ವ್ಯಾಪ್ತಿಯಲ್ಲಿ ಬರುವ ಶಾಲಾ/ಕಾಲೇಜುಗಳ ಪ್ರಾಂಶುಪಾಲರು/ ಮುಖ್ಯಸ್ಥರುಗಳನ್ನು ಸಂಪರ್ಕಿಸಿ, ಶಾಲಾ/ಕಾಲೇಜುಗಳ ಸಮಯಗಳನ್ನು ತಿಳಿದುಕೊಂಡು ಸದರಿ ಸಮಯಕ್ಕೆ ಸಾರಿಗೆಗಳನ್ನು ಕಾರ್ಯಾಚರಿಸಲು ಸೂಕ್ತ ಕ್ರಮ ಕೈಗೊಳ್ಳುವುದು.<br><br>• ಶಾಲಾ/ಕಾಲೇಜು ವಿದ್ಯಾರ್ಥಿಗಳು ಹೆಚ್ಚಿಗೆ ಸೇರುವ ಬಸ್ ನಿಲ್ದಾಣ/ಜಂಕ್ಷನ್‌ಗಳಲ್ಲಿ ಸಾರಿಗೆ ಸೇವೆಗಳ ಮೇಲ್ವಿಚಾರಣೆಗೆ ಸಂಚಾರ ನಿಯಂತ್ರಕರು/ಇತರೆ ಮೇಲ್ವಿಚಾರಕರನ್ನು ತಪ್ಪದೇ ನಿಯೋಜಿಸಿ ಸುಗಮ ಕಾರ್ಯಾಚರಣೆ ಬಗ್ಗೆ ನಿಗಾ ವಹಿಸುವುದು.<br><br>• ವಿಭಾಗದ ಎಲ್ಲಾ ಚಾಲನಾ ಸಿಬ್ಬಂದಿಗಳಿಗೆ ಶಾಲಾ ಕಾಲೇಜು ವಿದ್ಯಾರ್ಥಿಗಳು ಬಸ್ಸುಗಳಲ್ಲಿ ಪ್ರಯಾಣಿಸಲು ಅನುವಾಗಲು ನಿಗದಿತ ಬಸ್ ನಿಲ್ದಾಣಗಳಲ್ಲಿ ನಿಲುಗಡೆ ನೀಡಿ, ಅವರನ್ನು ಹತ್ತಿಸಿ/ಇಳಿಸಿಕೊಂಡು ಮುಂದೆ ಹೋಗುವುದರ ಜೊತೆಗೆ ವಿದ್ಯಾರ್ಥಿಗಳೊಂದಿಗೆ ಸೌಜನ್ಯಯುತವಾಗಿ ವರ್ತಿಸಲು ತಿಳುವಳಿಕೆ ನೀಡುವುದು.<br><br>ಸಾರಿಗೆ ಸಂಸ್ಥೆಗಳಲ್ಲಿ ಕಾರ್ಯಾಚರಣೆಯಲ್ಲಿರುವ ಅನುಸೂಚಿಗಳ ವಿವರ ಈ ಕೆಳಕಂಡಂತಿದೆ:<br><br>**ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ:**<br><br>ಶಕ್ತಿ ಯೋಜನೆ ಜಾರಿಗೂ ಮೊದಲು 45,255 ಸರತಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿತ್ತು. ಶಕ್ತಿ ಯೋಜನೆ ಜಾರಿಯಾದ ನಂತರದಲ್ಲಿ 49,358 ಸರತಿಗಳನ್ನು ಮಾಡಲಾಗುತ್ತಿದೆ. ಪ್ರತಿದಿನ 4,103 ಹೆಚ್ಚುವರಿ ಸರತಿಗಳನ್ನು ಕಾರ್ಯಾಚರಣೆಯನ್ನು ಮಾಡಲಾಗುತ್ತಿದೆ. |

| | | |
|---|---|---|
| | | **ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ:**<br>ಸಂಸ್ಥೆಯಲ್ಲಿ ಶಕ್ತಿ ಯೋಜನೆ ಜಾರಿಗೆ ಮೊದಲು 56,646 ಸುತ್ತುವಳಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿತ್ತು, ಶಕ್ತಿ ಯೋಜನೆ ಜಾರಿಯಾದ ನಂತರದಲ್ಲಿ 58,369 ಸುತ್ತುವಳಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದ್ದು, ಪ್ರತಿದಿನ 1,723 ಹೆಚ್ಚುವರಿ ಸುತ್ತುವಳಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ.<br>**ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ:**<br>ಸಂಸ್ಥೆಯಲ್ಲಿ ಶಕ್ತಿ ಯೋಜನೆ ಜಾರಿಗೂ ಮೊದಲು 34,676 ಸರತಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿತ್ತು, ಶಕ್ತಿ ಯೋಜನೆ ಜಾರಿ ನಂತರದಲ್ಲಿ 36,395 ಸರತಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ. ಪ್ರತಿ ದಿನ 1,719 ಹೆಚ್ಚುವರಿ ಸರತಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ.<br>**ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ:**<br>ನಿಗಮದಲ್ಲಿ ಶಕ್ತಿ ಯೋಜನೆಯನ್ನು ವ್ಯವಸ್ಥಿತವಾಗಿ ಅನುಷ್ಠಾನಗೊಳಿಸಲು 638 ಹೆಚ್ಚುವರಿ ಅನುಸೂಚಿಗಳನ್ನು ಸೇರ್ಪಡೆಗೊಳಿಸಿ ಕಾರ್ಯಾಚರಣೆ ಮಾಡಲಾಗುತ್ತಿದೆ.<br>ಪ್ರಸ್ತುತ, ನಾಲ್ಕು ಸಾರಿಗೆ ಸಂಸ್ಥೆಗಳು ಕಲ್ಪಿಸುತ್ತಿರುವ ಸಾರಿಗೆಗಳು ಶಾಲಾ/ಕಾಲೇಜು ವಿದ್ಯಾರ್ಥಿಗಳ ಬೇಡಿಕೆಗೆ ಅನುಗುಣವಾಗಿ ಇರುತ್ತದೆ. ಆದಾಗ್ಯೂ, ಹೆಚ್ಚುವರಿ ಬೇಡಿಕೆ ಬಂದಲ್ಲಿ, ಬೇಡಿಕೆಗೆ ಅನುಗುಣವಾಗಿ ಮೂಲಭೂತ ಸೌಕರ್ಯಗಳನ್ನು ಕ್ರೋಢೀಕರಿಸಿಕೊಂಡು ಮಾರ್ಗ ಸಮೀಕ್ಷೆ ಕೈಗೊಂಡು ಪರಿಶೀಲಿಸಿ, ಸಾರಿಗೆ ಸೌಲಭ್ಯವನ್ನು ಒದಗಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. |
| ಊ) | ಸರ್ಕಾರಿ ಪ್ರೌಢ ಶಾಲೆಗಳಲ್ಲಿಯೇ ಪ್ರಾರಂಭವಾದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಬಗ್ಗೆ ಸರ್ಕಾರಕ್ಕೆ ಮಾಹಿತಿ ಇದೆಯೇ; ಇದ್ದಲ್ಲಿ, ಈ ಬಗ್ಗೆ ಸರ್ಕಾರ ಯಾವ ನಿರ್ಧಾರ ಕೈಗೆತ್ತಿಕೊಂಡಿದೆ? (ವಿವರ ನೀಡುವುದು) | ಮಾಹಿತಿ ಇದೆ. 2023-24 ನೇ ಸಾಲಿನಲ್ಲಿ 03 ಕಾಲೇಜುಗಳು ಹಾಗೂ 2024-25 ನೇ ಸಾಲಿನಲ್ಲಿ 02 ಪದವಿ ಪೂರ್ವ ಕಾಲೇಜುಗಳು ಪ್ರೌಢಶಾಲೆಗಳಲ್ಲಿಯೇ ಪ್ರಾರಂಭವಾಗಿವೆ. ಸದರಿ 03 ಪದವಿ ಪೂರ್ವ ಕಾಲೇಜುಗಳಿಗೆ ಕೆಕೆಆರ್‌ಡಿಬಿ ಅನುದಾನದಲ್ಲಿ ಕಟ್ಟಡಗಳು ಮಂಜೂರಾಗಿದ್ದು, ನಿವೇಶನ ಖರೀದಿ ಪ್ರಕ್ರಿಯೆ ನಡೆಯುತ್ತಿದೆ. (ಸದರಿ ಹೊಸ ಕಾಲೇಜುಗಳ ಪಟ್ಟಿಯನ್ನು **ಅನುಬಂಧ-2** ರಲ್ಲಿ ಒದಗಿಸಲಾಗಿದೆ). |

**ಸಂಖ್ಯೆ: ಇಪಿ 212 ಡಿಜಿಡಬ್ಲ್ಯೂ, 2024**

(ಮಧು ಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು